ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 22ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಅ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:

I. ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2017ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಈ ಕೆಳಕಂಡ ವರದಿಗಳನ್ನು ಸಭೆಯ ಮುಂದಿಡುವುದು:

1. ರಾಜಸ್ವ ವಲಯದ ಮೇಲಿನ ವರದಿ (2017ನೇ ವರ್ಷದ ವರದಿ ಸಂಖ್ಯೆ–7)
2. ಆರ್ಥಿಕ ವಲಯದ ಮೇಲಿನ ವರದಿ (2017ನೇ ವರ್ಷದ ವರದಿ ಸಂಖ್ಯೆ–8)
3. ಸ್ಥಳೀಯ ಸಂಸ್ಥೆಗಳ ಮೇಲಿನ ವರದಿ (2017ನೇ ವರ್ಷದ ವರದಿ ಸಂಖ್ಯೆ–9)

–2–

II. ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2017ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿಯನ್ನು (2018ನೇ ವರ್ಷದ ವರದಿ ಸಂಖ್ಯೆ–3) ಸಭೆಯ ಮುಂದಿಡುವುದು.

III. ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಪಟ್ಟಿಯ ರೀತ್ಯ.

4. ವರದಿಗಳನ್ನೊಪ್ಪಿಸುವುದು

1) **ಶ್ರೀ ಎನ್. ಹೆಚ್. ಶಿವಶಂಕರರೆಡ್ಡಿ** (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) ಅವರು 2016–17ನೇ ಸಾಲಿನ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಹತ್ತೊಂಬತ್ತನೇ ವರದಿಯನ್ನೊಪ್ಪಿಸುವುದು.

2) **ಶ್ರೀ ಎನ್. ಹೆಚ್. ಶಿವಶಂಕರರೆಡ್ಡಿ** (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು 2016–17 ಮತ್ತು 2017–18ನೇ ಸಾಲಿನ ಅರ್ಜಿಗಳ ಸಮಿತಿಯ ಇಪ್ಪತ್ತಾರನೇ ವರದಿಯನ್ನೊಪ್ಪಿಸುವುದು.

3) **ಶ್ರೀ ಬಿ.ಆರ್. ಯಾವಗಲ್** (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು 2016–18ನೇ ಸಾಲಿನ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 25ನೇ ವರದಿಯನ್ನೊಪ್ಪಿಸುವುದು.

4) **ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು 2016–17 ಮತ್ತು 2017–18ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ 12ನೇ ವರದಿಯನ್ನೊಪ್ಪಿಸುವುದು.

5) **ಶ್ರೀ ಜೆ.ಆರ್. ಲೋಬೋ** (ಅಧ್ಯಕ್ಷರು, ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿ) ಅವರು 2016–17ನೇ ಸಾಲಿನ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯ 10ನೇ, 11ನೇ, 12ನೇ ಮತ್ತು 13ನೇ ವರದಿಗಳನ್ನೊಪ್ಪಿಸುವುದು.

5. ಶಾಸನ ರಚನೆ

I. ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಬಿ. ರಮಾನಾಥ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) ಅವರು :–

ಅ) 2018ನೇ ಸಾಲಿನ ಕರ್ನಾಟಕ ಮರಗಳ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು

II. ವಿಧೇಯಕವನ್ನು ಮಂಡಿಸುವುದು

1) **ಶ್ರೀ ಎಂ.ಆರ್. ಸೀತಾರಾಮ್ (ಯೋಜನೆ, ಸಾಂಖ್ಯಿಕ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು :–**

ಅ) 2018ನೇ ಸಾಲಿನ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

III. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಶ್ರೀ ಎಂ.ಆರ್. ಸೀತಾರಾಮ್ (ಯೋಜನೆ, ಸಾಂಖ್ಯಿಕ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು :–**

ಅ) 2018ನೇ ಸಾಲಿನ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ವಿತ್ತೀಯ ಕಾರ್ಯಕಲಾಪಗಳು

ಅ) "2018–19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ".

ಆ) 2017–18ನೇ ಸಾಲಿನ ಪೂರಕ ಅಂದಾಜುಗಳ (ಮೂರನೆಯ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ.

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಬಿ.ಎನ್.ವಿಜಯಕುಮಾರ್, ಶಿವನಗೌಡ ನಾಯಕ್, ಡಿ.ಎನ್. ಜೀವರಾಜ್ ಮತ್ತು ಸಿ.ಟಿ. ರವಿ ಇವರುಗಳು** – ರಾಜ್ಯದಲ್ಲಿ ರೈತರು 2017–18ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ರೈತರಿಂದ ವಿಮೆ ಹಣ ಪಡೆದಿದ್ದು, ಪ್ರಸ್ತುತ ಸಂಕಷ್ಟದಲ್ಲಿರುವ ರೈತರಿಗೆ ಬೆಳೆ ವಿಮೆ ಪರಿಹಾರ ಒದಗಿಸುವ ಬಗ್ಗೆ

ಹಾಗೂ

ಶ್ರೀ ಬಸವರಾಜ ಎಸ್. ಬೊಮ್ಮಾಯಿ ಇವರು – ಹಾವೇರಿ ಜಿಲ್ಲೆಯ ರೈತರಿಗೆ ಭತ್ತದ ಬೆಳೆಯ ವಿಮೆ ಹಣ ಪಾವತಿಯಾಗದಿರುವ ಬಗ್ಗೆ ಪ್ರತಿಭಟನೆ ಮಾಡುತ್ತಿರುವ ರೈತರನ್ನು ವಿನಾಕಾರಣ ಬಂಧಿಸುತ್ತಿದ್ದು, ಬೆಳೆ ವಿಮೆ ಪರಿಹಾರ ಹಣವನ್ನು ಕೂಡಲೇ ಬಿಡುಗಡೆ ಮಾಡುವಂತೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಹೆಚ್.ಡಿ ಕುಮಾರಸ್ವಾಮಿ, ಹೆಚ್. ಡಿ ರೇವಣ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಬಿ. ಸುರೇಶ್‌ಬಾಬು ಮತ್ತು ಇತರರು** – ಹಾಸನ ಜಿಲ್ಲೆಯ ಹೇಮಾವತಿ, ಯಗಚಿ ಮತ್ತು ವಾಟೇಹೊಳೆ ಜಲಾಶಯಗಳ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ನೀರನ್ನು ಹರಿಸದಿರುವುದರಿಂದ ಬೆಳೆ ನಾಶವಾಗಿದ್ದು, ಅಲ್ಲಿನ ರೈತರಿಗೆ ಪರಿಹಾರ ನೀಡುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ವಾಸು, ಪಿ.ಎಂ. ನರೇಂದ್ರಸ್ವಾಮಿ, ಹೆಚ್.ಪಿ. ಮಂಜುನಾಥ್ ಮತ್ತು ಕೆ.ಬಿ. ಪ್ರಸನ್ನಕುಮಾರ್ ಇವರುಗಳು** – ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಯು.ಜಿ.ಸಿ. ಮಾನ್ಯತೆ ರದ್ದಾಗಿರುವುದರಿಂದ ವಿದ್ಯಾರ್ಥಿಗಳಿಗೆ ಆಗಿರುವ ಅನಾನುಕೂಲಗಳು ಸಿಬ್ಬಂದಿ ವರ್ಗದವರಿಗೆ ಉಂಟಾಗಿರುವ ಆರ್ಥಿಕ ನಷ್ಟ ಮತ್ತು ನಕಲಿ ಅಂಕ ಪಟ್ಟಿ ಹಗರಣಗಳ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ದುರ್ಯೋಧನ ಎಂ. ಐಹೊಳೆ, ಉಮೇಶ್ ವಿ. ಕತ್ತಿ, ವಿಶ್ವನಾಥ್ ಚಂದ್ರಶೇಖರ ಮಾಮನಿ ಮತ್ತು ಶಶಿಕಲಾ ಅ. ಜೊಲ್ಲೆ ಇವರುಗಳು** – ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸುವ ಕುರಿತು ವಿವಿಧ ಸಂಘಟನೆಗಳು ಅನಿರ್ದಿಷ್ಟ ಕಾಲದವರೆಗೆ ಮುಷ್ಕರವನ್ನು ನಡೆಸುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಬಿ. ಸುರೇಶ್‌ಗೌಡ ಇವರು** – 2017–18ನೇ ಸಾಲಿನಲ್ಲಿ ತುಮಕೂರು ಗ್ರಾಮಾಂತರ ಕ್ಷೇತ್ರಕ್ಕೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ಯೋಜನೆಗಳಡಿ ಕಾಮಗಾರಿಗಳು ಶೇಕಡ 90ರಷ್ಟು ಪೂರ್ಣಗೊಂಡಿದ್ದು, ಇಲಾಖೆಗೆ ಹಣ ಬಿಡುಗಡೆಯಾಗಿದ್ದರೂ ಗುತ್ತಿಗೆದಾರರಿಗೆ ಹಣ ಪಾವತಿಸಲು ವಿಳಂಬ ಮಾಡುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಹೆಬ್ಬೂರು ಹೋಬಳಿ ಕರಡಗೆರೆ ಕಾವಲ್ ಗ್ರಾಮದ ಸರ್ವೆ ನಂ. 5ರಲ್ಲಿರುವ ಒಟ್ಟು 837.27 ಎಕರೆ ಜಮೀನಿನಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ರೈತರು ನಮೂನೆ 50 ಮತ್ತು 53ರಡಿ ಜಮೀನು ಮಂಜೂರು ಮಾಡುವಂತೆ ಕೋರಿ ಅರ್ಜಿ ಸಲ್ಲಿಸಿದ್ದು ಅವರುಗಳಿಗೆ ಜಮೀನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಗುರುಪಾಟೀಲ ಶಿರವಾಳ ಇವರು** – ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ನಾಗರಿಕರಿಗೆ ವಂಶವೃಕ್ಷ ನೀಡಲು ಉಪ ತಹಶೀಲ್ದಾರರು ನಿರಾಕರಿಸುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ಕೆ.ಎಸ್. ಮಂಜುನಾಥಗೌಡ ಇವರು** – ಮಾಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಟೇಕಲ್ ಹೋಬಳಿಯ ಸುತ್ತಮುತ್ತ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದರಿಂದ ಅಲ್ಲಿರುವ ಶ್ರೀ ವೇಣುಗೋಪಾಲಸ್ವಾಮಿ ಮತ್ತು ಶ್ರೀ ಅಂಜನೇಯಸ್ವಾಮಿ ದೇವಸ್ಥಾನಗಳು ಸಂಪೂರ್ಣ ನಾಶವಾಗಿದ್ದು, ಮುಜರಾಯಿ ದೇವಸ್ಥಾನಗಳನ್ನು ನಾಶಪಡಿಸಿರುವವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರ ಗಮನ ಸೆಳೆಯುವುದು.

5) **ಶ್ರೀ ವಿ. ಸುನೀಲ್ ಕುಮಾರ್ ಇವರು** – ಗೌರವ ಡಾಕ್ಟರೇಟ್ ಪದವಿ ನೀಡಲು ಇರುವ ಮಾನದಂಡಗಳು ಹಾಗೂ ಆ ಪದವಿ ಪಡೆದುಕೊಂಡು ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಇವರು** – ಸವಿತಾ ಸಮಾಜವು ರಾಜ್ಯದಲ್ಲಿ ಅತ್ಯಂತ ಹಿಂದುಳಿದ ಸಮಾಜವಾಗಿದ್ದು, ಈ ಸಮಾಜವನ್ನು ಪರಿಶಿಷ್ಟ ಪಂಗಡದಲ್ಲಿ ಸೇರಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಹೆಬ್ಬೂರು ಹೋಬಳಿ ಕೇಂದ್ರದಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಭವನ ಹಾಗೂ ಪಾರ್ವತಿ ಪುರ ಗ್ರಾಮಕ್ಕೆ ಬಾಬು ಜಗಜೀವನರಾಮ್ ಭವನಗಳ ನಿರ್ಮಾಣ ಕಾಮಗಾರಿ ಕಾರ್ಯವು ಅನುದಾನದ ಕೊರತೆಯಿಂದ ಅಪೂರ್ಣಗೊಂಡಿದ್ದು, ಈ ಎರಡು ಭವನಗಳನ್ನು ಪೂರ್ಣಗೊಳಿಸಲು ಅವಶ್ಯವಿರುವ ಅನುದಾನ ಮಂಜೂರು ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕಟ್ಟೆಬೆಳಗುಲಿ ಗ್ರಾಮದ ಶ್ರೀರಾಮದೇವರ ಅಣೆಕಟ್ಟು ಸುಮಾರು 148 ವರ್ಷಗಳಷ್ಟು ಹಳೆಯದಾಗಿದ್ದು, ಇದಕ್ಕೆ ಪರ್ಯಾಯವಾಗಿ ಹೊಸ ಅಣೆಕಟ್ಟನ್ನು ನಿರ್ಮಿಸುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

9) **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ ಮತ್ತು ಕೆ.ಎಂ ಶಿವಲಿಂಗೇಗೌಡ ಇವರುಗಳು** – ಹಾಸನ ತಾಲ್ಲೂಕಿನ ದುದ್ದ ಮತ್ತು ಶಾಂತಿ ಗ್ರಾಮ ಹೋಬಳಿ ಮತ್ತು ಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗನ ಹಳ್ಳಿ ಹೋಬಳಿಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ತೀವ್ರ ತೊಂದರೆಯಾಗಿದ್ದು, ಆ ಭಾಗದ 195 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ಪಡೆಯುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

10) **ಶ್ರೀ ಕಳಲೆ ಎನ್. ಕೇಶವಮೂರ್ತಿ ಇವರು** – ನಂಜನಗೂಡು ನಗರದಲ್ಲಿ ಫ್ಲೈ ಓವರ್ ನಿರ್ಮಿಸುವ ಕಾಮಗಾರಿಯ ರೂಪರೇಷೆಗಳ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

11) **ಶ್ರೀ ಕೆ.ಜಿ. ಬೋಪಯ್ಯ ಇವರು** – ವಿರಾಜಪೇಟೆ ತಾಲ್ಲೂಕಿನ ಮಿನಿ ವಿಧಾನಸೌಧದ ಕಾಮಗಾರಿಯು ಪೂರ್ಣಗೊಳ್ಳುವ ಮೊದಲೇ ಉದ್ಘಾಟನೆಯಾಗಿದ್ದು, ಉಳಿಕೆ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಖಾಸಗಿ ದೇವಸ್ಥಾನಗಳನ್ನು ಮುಜರಾಯಿ ಇಲಾಖೆಯ ವಶಕ್ಕೆ ತೆಗೆದುಕೊಳ್ಳಲು ಉದ್ದೇಶಿಸಿರುವ ಬಗ್ಗೆ ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

13) **ಶ್ರೀ ಗೋವಿಂದ ಎಂ. ಕಾರಜೋಳ ಇವರು** – ಬಾಗಲಕೋಟೆ ಜಿಲ್ಲೆಯ ಮುಧೋಳ ನಗರಕ್ಕೆ ಅವಶ್ಯವಿರುವ ಒಳಚರಂಡಿ ಯೋಜನೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅವಶ್ಯವಿರುವ ಅನುದಾನ ಬಿಡುಗಡೆ ಮಾಡುವುದು ಹಾಗೂ 50 ವರ್ಷಗಳ ಹಿಂದೆ ಅಳವಡಿಸಲಾಗಿರುವ ಒಳಚರಂಡಿ ಪೈಪುಗಳನ್ನು ಬದಲಾಯಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರ ಗಮನ ಸೆಳೆಯುವುದು.

14) **ಶ್ರೀ ಡಿ.ಎನ್. ಜೀವರಾಜ್ ಇವರು** – ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಡಾಟಾ ಎಂಟ್ರಿ ಆಪರೇಟರ್ ಆಗಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ಕಳೆದ ಕೆಲವು ತಿಂಗಳುಗಳಿಂದ ವೇತನ ಪಾವತಿಯಾಗದೇ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15) **ಶ್ರೀ ಗೋವಿಂದ ಎಂ. ಕಾರಜೋಳ ಇವರು** – ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಲೋಕಾಪುರ ಗ್ರಾಮದ ಪಶುಚಿಕಿತ್ಸಾಲಯದ ಆವರಣದಲ್ಲಿ ನಂದಿನಿ ಕ್ಷೀರ ಮತ್ತು ದಾಸ್ತನು ಮಳಿಗೆ ಸ್ಥಾಪನೆಗೆ ನೀಡಿರುವ ಅನುಮತಿಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

16) **ಶ್ರೀ ಕಳಲೆ ಎನ್. ಕೇಶವಮೂರ್ತಿ ಇವರು** – ನಂಜನಗೂಡು ನಗರದಲ್ಲಿರುವ ಬೀದಿಗಳಿಗೆ ಕಾಂಕ್ರೀಟ್ ರಸ್ತೆ ನಿರ್ಮಾಣವಾಗುತ್ತಿದ್ದು, ವಿದ್ಯುತ್ ಕಂಬಗಳನ್ನು ಬದಲಾಯಿಸಿ ನೆಲದಡಿಯಲ್ಲಿ ಕೇಬಲ್‌ಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

17) **ಶ್ರೀ ಸಾ.ರಾ. ಮಹೇಶ್ ಇವರು** – ರಾಜ್ಯದಲ್ಲಿ ಸರ್ಕಾರಿ ಗಿರಿಜನ ಆಶ್ರಮ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕ/ಶಿಕ್ಷಕಿಯರಿಗೆ ಸೇವಾ ಭದ್ರತೆಯನ್ನು ನೀಡಿ ಸಮಾನ ಕೆಲಸಕ್ಕೆ ಸಮಾನ ವೇತನವನ್ನು ನೇರವಾಗಿ ಇಲಾಖಾ ವತಿಯಿಂದ ಪಾವತಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

18) **ಶ್ರೀ ಎನ್.ಹೆಚ್. ಕೋನರೆಡ್ಡಿ ಇವರು** – ರಾಜ್ಯದಲ್ಲಿನ ಸಾರಿಗೆ ಇಲಾಖೆಯಲ್ಲಿ ವರ್ಗಾವಣೆಗೊಂಡಿರುವ ಸಿಬ್ಬಂದಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗಿದ್ದರೂ ಇದುವರೆವಿಗೂ ವರ್ಗಾವಣೆಗೊಂಡ ನೌಕರರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸದೇ ಇರುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

19) **ಶ್ರೀ ಗುರುಪಾಟೀಲ ಶಿರವಾಳ ಇವರು** – ರಾಜ್ಯದಲ್ಲಿ ತೊಗರಿ ಬೆಳೆಯ ರೈತರು ಆನ್‌ಲೈನ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಲು ಹೆಚ್ಚುವರಿ ಒಂದು ವಾರ ಅವಕಾಶ ನೀಡುವುದು ಹಾಗೂ ರೈತರು ಬೆಳೆದ ಬೆಳೆಯನ್ನು ಖರೀದಿ ಮಾಡಲು ಅವಕಾಶ ನೀಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

20) **ಶ್ರೀ ಕೆ.ಜಿ. ಬೋಪಯ್ಯ ಇವರು** – ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕು ವ್ಯಾಪ್ತಿಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಲಾಗಿದ್ದು, ನಕ್ಷೆ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿರುವವರಿಗೆ ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದವರು ಅಗತ್ಯ ಅನುಮೋದನೆ ನೀಡದೇ ಇರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

21) **ಶ್ರೀ ಗುರು ಪಾಟೀಲ ಶಿರವಾಳ ಇವರು** – ಯಾದಗಿರಿ ಜಿಲ್ಲೆಯ ಯಾದಗಿರಿ, ಸುರುಪುರ, ಶಹಾಪುರ ತಾಲ್ಲೂಕುಗಳಲ್ಲಿನ ವಿ.ಎಸ್.ಎಸ್. ಬ್ಯಾಂಕ್‌ಗಳ ಮೂಲಕ ರೈತರು ಬೆಳೆ ವಿಮಾ ಪರಿಹಾರಕ್ಕೆ ಪ್ರೀಮಿಯಂ ಜಮೆ ಮಾಡುತ್ತಿದ್ದರೂ ಅವರುಗಳಿಗೆ ವಿಮಾ ಪರಿಹಾರ ನೀಡದೇ ವಂಚಿಸಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

22) **ಶ್ರೀ ಬಿ.ಆರ್. ಪಾಟೀಲ ಇವರು** – ಹೈದ್ರಾಬಾದ್–ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧಿಕಾರಿಗಳ ನಿರಾಸಕ್ತಿ, ವಿಳಂಬ ನೀತಿಯಿಂದ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

23) **ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ ಮತ್ತು ಹೆಚ್.ಎಸ್. ಶಿವಶಂಕರ್ ಇವರುಗಳು** – ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದಲ್ಲಿ ವಿವಿಧ ಹುದ್ದೆಗಳನ್ನು ತುಂಬಲು ನಡೆದಿರುವ ನೇಮಕಾತಿಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

24) **ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್ ಮತ್ತು ಹೆಚ್.ಡಿ. ರೇವಣ್ಣ ಇವರುಗಳು** – ಹಾಸನ ಜಿಲ್ಲೆ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ನಿರ್ಮಾಣವಾಗುತ್ತಿರುವ ಹಿಂದುಳಿದ ವರ್ಗಗಳ ಸಮಾಜದ ಸಮುದಾಯ ಭವನಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

25) **ಶ್ರೀ ಎಂ.ಟಿ. ಕೃಷ್ಣಪ್ಪ ಇವರು** – ಶ್ರವಣಬೆಳಗೊಳ ಮಹಾಮಸ್ತಕಾಭಿಷೇಕ ಸಂದರ್ಭದಲ್ಲಿ ಯಾತ್ರಾರ್ಥಿಗಳಿಗೆ ತಾತ್ಕಾಲಿಕ ವಸತಿ ಸೌಲಭ್ಯಗಳ ನಿರ್ಮಾಣ ಮಾಡುವ ಕಾಮಗಾರಿಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳ ಗಮನ ಸೆಳೆಯುವುದು.

26) **ಶ್ರೀ ಸಿ.ಎನ್. ಬಾಲಕೃಷ್ಣ ಇವರು** – ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯ ದಂಡಿಗನ ಹೋಬಳಿ ಆನೇಕೆರೆ ಹಾಗೂ ಇತರೆ 65 ಗ್ರಾಮಗಳಿಗೆ "ಬಹು ಗ್ರಾಮ ಯೋಜನೆಯಡಿಯಲ್ಲಿ" ಶಾಶ್ವತ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ವಿಷಯದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

27) **ಶ್ರೀ ಹೆಚ್.ಡಿ. ರೇವಣ್ಣ ಇವರು** – ಹಾಸನ ಜಿಲ್ಲೆ, ಹಾಸನ ತಾಲ್ಲೂಕು ವ್ಯಾಪ್ತಿಯ ದುದ್ದ ಮತ್ತು ಶಾಂತಿ ಗ್ರಾಮ ಹೋಬಳಿ ಮತ್ತು ದಂಡಿಗನ ಹಳ್ಳಿ ಹೋಬಳಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರಿನ ಕಾಮಗಾರಿಗಳಿಗೆ ಅವಶ್ಯ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

9. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ಹೆಚ್.ಡಿ. ರೇವಣ್ಣ ಇವರು** – ಹಾಸನದ ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ವಿದ್ಯಾಲಯಗಳ (ಮೆಡಿಕಲ್) ಕಾಲೇಜು ಕಾಮಗಾರಿ ನೆನೆಗುದಿಗೆ ಬಿದ್ದಿರುವುದು ಮತ್ತು ಕಾಮಗಾರಿಗೆ ಅನುದಾನ ಬಿಡುಗಡೆಗೆ ಕುರಿತು ದಿನಾಂಕ: 08.02.2018ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 38(317)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ರವಿ.ಸಿ.ಟಿ. ಇವರು** – ಚಿಕ್ಕಮಗಳೂರು ಜಿಲ್ಲೆಗೆ ವೈದ್ಯಕೀಯ ಕಾಲೇಜು ಮಂಜೂರಾಗಿದ್ದರೂ ಇದುವರೆವಿಗೂ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸದೇ ಇರುವ ಕುರಿತು ದಿನಾಂಕ: 08.02.2018ರಂದು ಸದನದಲ್ಲಿ ಉತ್ತರಿಸುವ 3ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 35(454)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

10. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯ

1) **ಶ್ರೀ ಕೆ. ಗೋಪಾಲಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು:**

“ಕನ್ನಡ ಭಾಷೆಯನ್ನು ಯುನೆಸ್ಕೋ ಪಟ್ಟಿಯಲ್ಲಿ ಸೇರ್ಪಡೆ ಮಾಡಲು ಶಿಫಾರಸ್ಸು ಮಾಡಬೇಕೆಂದು ಈ ಸದನವು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ.”

ಎಸ್. ಮೂರ್ತಿ
ಕಾರ್ಯದರ್ಶಿ (I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm